# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೆಚ್.ಎ.ಎಲ್ ಏರ್‌ಪೋರ್ಟ್

## ಉಪವಿಭಾಗ ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೆಚ್.ಎ.ಎಲ್/ಪಿಆರ್/ 21 /2022-23 ದಿನಾಂಕ: 24-05-2022

### 21ನೇ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾನ್ಯ ಆಯುಕ್ತರು ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ:19/01/2022, ಆದೇಶದಂತೆ ದಿನಾಂಕ;24/02/2022 ರಂದು ನೋಡಲ್ ಅಧಿಕಾರಿ ಶ್ರೀ.ಶಿವಲಿಂಗಪ್ಪ ಸಾಹುಕಾರ್ , ಸಹಾಯಕ ಕಾರ್ಯಪಾಲಕ ಅಭಿಯಂತರು(ಕೆರೆಗಳು) , ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,ಇವರ ಅಧ್ಯಕ್ಷತೆಯಲ್ಲಿ ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗದ ವಾರ್ಡ್-56 ಎ.ನಾರಾಯಣಪುರದಲ್ಲಿ ದಿನಾಂಕ:24-05-2022ರಂದು ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ನಡೆಸಿದ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

**ಉಪಸ್ಥಿತರು:**

| ಕ್ರ.ಸಂ | ಹೆಸರು | ಹುದ್ದೆ |
|---|---|---|
| | | ಅಧಿಕಾರಿಗಳು |
| 1 | ಶ್ರೀ.ಶಿವಲಿಂಗಪ್ಪ ಸಾಹುಕಾರ್ | ವಾರ್ಡ್ ಸಮಿತಿ ಸಭೆಯ ನೋಡಲ್ ಅಧಿಕಾರಿ ವಾ.ನಂ.56, ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿಬಿಎಂಪಿ |
| 2 | ಶ್ರೀ.ಜಿ.ಡಿ.ಸೋಮಯ್ಯ | ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.56 ಎ.ನಾರಾಯಣಪುರ |
| 3 | ಶ್ರೀ.ಸುವರ್ಣ ಹೆಚ್.ಸಿ | ಕಿರಿಯ ಆರೋಗ್ಯ ನಿರೀಕ್ಷಕರು |
| 4 | ಶ್ರೀಮತಿ.ಡಾ॥ ರಚನ | ಆರೋಗ್ಯ ಅಧಿಕಾರಿ ವಾರ್ಡ್ ನಂ 56 ಪ್ರಾಥಮಿಕ ಆರೋಗ್ಯ ಕೇಂದ್ರ ಎ.ನಾರಾಯಣಪುರ |
| 5 | ಶ್ರೀ.ಹರ್ಷ.ಎಸ್ | ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಮಹದೇವಪುರ |
| 6 | ಶ್ರೀ.ಮಹಮ್ಮದ್ ಮುದಾಸೀರ್ | ಸಹಾಯಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ |
| 7 | ಶ್ರೀ.ಹೆಚ್.ಆರ್.ರವಿ | ಕಂದಾಯ ಪರಿವೀಕ್ಷಕರು ವಾರ್ಡ್ ನಂ.56 |
| 8 | ಶ್ರೀಮತಿ.ಬೇಬಿ ಜಿ.ಆರ್ | ವಾರ್ಡ್ ಮಾರ್ಷಲ್ |
| | | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |
| 9 | ಶ್ರೀ.ಸುರೇಶ್ .ವಿ | ಎ-ನಾರಾಯಣಪುರ |
| 10 | ಶ್ರೀಮತಿ.ಮಂಗಳ | ಎ-ನಾರಾಯಣಪುರ |
| 11 | ಶ್ರೀ.ಸುನಿಲ್ | ಎ-ನಾರಾಯಣಪುರ |
| 12 | ಶ್ರೀ.ಮಣಿ | ಎ-ನಾರಾಯಣಪುರ |
| 13 | ಶ್ರೀಮತಿ ಸುಲೇಖ | ಎ-ನಾರಾಯಣಪುರ |
| 14 | ಶ್ರೀ.ರಾಮುಲು | ಎ-ನಾರಾಯಣಪುರ |
| 15 | ಶ್ರೀ. ಎಸ್. ನಾರಾಯಣ್ | ಎ-ನಾರಾಯಣಪುರ |
| 16 | ಶ್ರೀ. ಚಿಟ್ಟಿ | ಎ-ನಾರಾಯಣಪುರ |
| 17 | ಶ್ರೀ. ಶಂಕರ್ | ಎ-ನಾರಾಯಣಪುರ |
| 18 | ಶ್ರೀ.ಪ್ರದೀಪ್ ರೆಡ್ಡಿ | ಎ-ನಾರಾಯಣಪುರ |

Scanned with CamScanner

**ನಡಾವಳಿ 1. ಕೋವಿಡ್-19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಸಾಂಬಾವ್ಯ ನಾಲ್ಕನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್-19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಪಟ್ಟಂತೆ ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು 12 ರಿಂದ 14 ವರ್ಷದೊಳಗಿನ ಮಕ್ಕಳಿಗೆ ಒಂದನೇ ಮತ್ತು ಎರಡನೇ ಡೋಸ್ ಲಸಿಕೆಯನ್ನು ನೀಡುತ್ತಿರುವುದಾಗಿ ಹಾಗೂ 60 ವರ್ಷ ಮೇಲ್ಪಟ್ಟವರಿಗೆ 70% ಬೂಸ್ಟರ್ ಡೋಸ್ ನೀಡಿರುವುದಾಗಿ ತಿಳಿಸಿದರು. ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ತೀರ್ಮಾನಿಸಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕ್ರಮ: ಪ್ರಾಥಮಿಕ ಆರೋಗ್ಯ ಕೇಂದ್ರದ ಅಧಿಕಾರಿಗಳು

**ನಡಾವಳಿ 2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳ ಸಂಬಂಧಿಸಿದ ವಿಷಯಗಳ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ರಸ್ತೆಗಳಲ್ಲಿ ಮ್ಯಾನ್‌ಹೋಲ್ ಎತ್ತರವನ್ನು ತಗ್ಗಿಸಬೇಕೆಂದು ಮತ್ತು ಕೆಲವು ರಸ್ತೆಗಳಲ್ಲಿ ಮ್ಯಾನ್‌ಹೋಲ್ ಎತ್ತರವನ್ನು ಹೆಚ್ಚಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದರು ಅದರಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಮಾತಾನಾಡಿ 15 ದಿನದೊಳಗೆ ಕಾಮಗಾರಿಯನ್ನು ಪ್ರಾರಂಭಿಸಿ ಬಗೆಹರಿಸುವುದಾಗಿ ತಿಳಿಸಿದರು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು

**ನಡಾವಳಿ 3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ .**

ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ ಚರ್ಚಿಸಲಾಗಿದ್ದು, ಸೊಳ್ಳೆ ಮತ್ತು ನೊಣಗಳು ಹೆಚ್ಚಾಗಿರುವುದರಿಂದ ಔಷದಿ ಸಿಂಪಡಣೆ ಮಾಡುವಂತೆ ಸಾರ್ವಜನಿಕರು ಒತ್ತಾಯಿಸಿದರು ಅದರಂತೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಹಾಗೂ ಪೌರಕಾರ್ಮಿಕರಿಗೆ ಕೈಚೀಲಗಳನ್ನು ನೀಡುವಂತೆ ಸಂಬಂಧಪಟ್ಟ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಸೂಚಿಸಲಾಯಿತು.

ಕ್ರಮ: ಘನತ್ಯಾಜ್ಯ ನಿರ್ವಹಣ ವಿಭಾಗ

**ನಡಾವಳಿ 4. ಕಂದಾಯ ಇಲಾಖೆಗೆ ಸಂಬಂದಿಸಿದ ವಿಷಯಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕಂದಾಯ ಶಾಖೆಯ ಅಧಿಕಾರಿಗಳಾದ ಕಂದಾಯ ಪರಿವೀಕ್ಷಕರು ಹಾಜರಾಗಿ ಈ ಹಿಂದೆ ನೀಡಿದ ನೋಟಿಸ್‌ಗೆ ಸಮಜಾಯಿಷಿ ನೀಡುತ್ತಾ ಮುಂದಿನ ವಾರ್ಡ್ ಸಮಿತಿ ಸಭೆಯ ಒಳಗಾಗಿ ಕಂದಾಯ ಇಲಾಖೆಗೆ ಸಂಬಂಧಿಸಿದ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವುದಾಗಿ ತಿಳಿಸಿದರು.

ಕ್ರಮ: ಕಂದಾಯ ಪರಿವೀಕ್ಷಕರು, ಕಂದಾಯ ಶಾಖೆ, ಎ.ನಾರಯಣಪುರ

Scanned with CamScanner

ಸಭಾವಿಷಯ 5. ಪೊಲೀಸ್ ಇಲಾಖೆಗೆ ಸಂಬಂಧಿಸಿದ ವಿಷಯದ ಬಗ್ಗೆ.

ಈ ಕುರಿತು ಚರ್ಚಿಸಲಾಗಿ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಉದಯನಗರ 1ನೇ ಮುಖ್ಯರಸ್ತೆ 4ನೇ ಅಡ್ಡರಸ್ತೆಯಲ್ಲಿ ಪುಂಡ ಪೋಕರಿಗಳು ಗಾಂಜಾ ಸೇವಿಸುವುದಾಗಿ ಹಾಗೂ ಬೈಕ್ ವೀಲಿಂಗ್ ಮಾಡುತ್ತಿರುವುದಾಗಿ ಸಾರ್ವಜನಿಕರು ಆಗ್ರಹಿಸಿರುತ್ತಾರೆ. ಅದರಂತೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗೆ ಸೂಚಿಸಲಾಯಿತು .

ಕ್ರಮ: ಪೊಲೀಸ್ ಇಲಾಖೆ, ಮಹದೇವಪುರ

ಸಭಾವಿಷಯ 6.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ .

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು, ವಾರ್ಡ್ ವ್ಯಾಪ್ತಿಯ ಕೆಲವು ರಸ್ತೆಗಳಲ್ಲಿ ನಾಮಫಲಕಗಳನ್ನು ಅಳವಡಿಸುವಂತೆ ಹಾಗೂ ಮೈತ್ರಿ ಸ್ಕೂಲ್ ರಸ್ತೆಯ ಕಾಮಗಾರಿಯನ್ನು ಪ್ರಾರಂಭಿಸುವಂತೆ ಸಾರ್ವಜನಿಕರು ಒತ್ತಾಯಿಸಿದರು.ಅದರಂತೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 56

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.56 ಎ.ನಾರಾಯಣಪುರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

24/09/2022
ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು
ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:-

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಕಛೇರಿ ಪ್ರತಿ.

Scanned with CamScanner